**8 ನೇ ಅಪರ ಮುಖ್ಯ ಮಹಾನಗರ ದಂಡಾಧಿಕಾರಿಯವರ ನ್ಯಾಯಾಲಯ, ಬೆಂಗಳೂರು.**

**ಸಿ.ಸಿ.ನಂ.13722/2019**

**ಸಿಡಬ್ಲ್ಯೂ-1, ಪಿಡಬ್ಲ್ಯೂ-1**

| | | |
|---|---|---|
| ಸಾಕ್ಷಿದಾರರ ಹೆಸರು | - | ಪದ್ಮ |
| ತಂದೆಯ /ಗಂಡನ ಹೆಸರು | - | ಕುಮಾರ್ |
| ವಯಸ್ಸು | - | 40 ವರ್ಷ |
| ಕೆಲಸ | - | ಗೃಹಿಣಿ |
| ವಾಸ | - | ಮಲ್ಲೇಶ್ವರಂ, ಬೆಂಗಳೂರು |

**ಸಾಕ್ಷಿಯನ್ನು ದಿನಾಂಕ 01-08-2023 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಹಿರಿಯ ಸಹಾಯಕ ಸಾರ್ವಜನಿಕ ಅಭಿಯೋಜಕರವರಿಂದಃ**

ನ್ಯಾಯಾಲಯದಲ್ಲಿರುವ ಆರೋಪಿ ನನಗೆ ಗೊತ್ತು .

ದಿ.17-08-2018 ರಂದು ತಿರುಪತಿಗೆ ಹೋಗಿ ಬರುವಾಗ ಪಕ್ಕದ ಮನೆಯವರು ಫೋನ್ ಮಾಡಿ ನಾವು ಸ್ನಾನದ ಉದ್ದೇಶಕ್ಕೆ ಮನೆಯ ಮುಂಭಾಗ ಶೀಟ್ ಹಾಕಿದ್ದು ಅದನ್ನು ಕಿತ್ತುಹಾಕಿ ಮೋರಿಗೆ ಎಸೆದು ನಾವು ಠಾಣೆಗೆ ಹೋಗಿ ದೂರು ಕೊಟ್ಟೆವು. ನಂತರ ಪೊಲೀಸರು ಮನೆಯ ಹತ್ತಿರ ಬಂದು ನೋಡಿದರು. ಆಗ ಆರೋಪಿಗೆ ಕರೆದು ಹೇಳಿದ್ದರು.

ದಿ.28-08-2018 ರಂದು ಬೆಳಿಗ್ಗೆ 08-30 ರಿಂದ 09-00 ಗಂಟೆ ಸಮಯದಲ್ಲಿ ಆರೋಪಿ ನಮ್ಮ ಮನೆಯ ಬಳಿ ಬಂದು ಅವಾಚ್ಯ ಶಬ್ದಗಳಿಂದ ಬೈಯ್ದು ನಮ್ಮ ತಂದೆ ತಾಯಿಯನ್ನು ಕೊಲೆ ಮಾಡುತ್ತೇನೆ ಎಂದು ಬೆದರಿಕೆ ಹಾಕಿ ನನ್ನ ಮೇಲೆ ಹಲ್ಲೆ ಮಾಡಲು ಪ್ರಯತ್ನ ಪಟ್ಟರು. ಆಗ ಠಾಣೆಗೆ ಹೋಗಿ ದೂರು ಕೊಟ್ಟೆನು. ಸದರಿ ದೂರನ್ನು ಸಾಕ್ಷಿ ನೋಡಿ ಗುರ್ತಿಸಿದ್ದು, ಅದನ್ನು ನಿಪಿ.1 ಎಂದು, ಸಾಕ್ಷಿ ಸಹಿಯನ್ನು ನಿಪಿ.1 ಎ ಎಂದು ಗುರ್ತಿಸಲಾಯಿತು. ಅದೇ ದಿನ ಪೊಲೀಸರು ಕೃತ್ಯ ಸ್ಥಳಕ್ಕೆ ಬಂದು ಮಹಜರ್ ಮಾಡಿ ನನ್ನ ಸಹಿ ಪಡೆದರು. ಸದರಿ ಮಹಜರನ್ನು ಸಾಕ್ಷಿ ನೋಡಿ ಗುರ್ತಿಸಿದ್ದು, ಅದನ್ನು ನಿಪಿ.2 ಎಂದು, ಸಾಕ್ಷಿ ಸಹಿಯನ್ನು ನಿಪಿ.2 ಎ ಎಂದು

ಗುರ್ತಿಸಲಾಯಿತು. ಆರೋಪಿ ಆಗಾಗ ಬೇರೆಯವರನ್ನು ತನ್ನ ಜೊತೆ ಕರೆದುಕೊಂಡು ಬಂದು ತೊಂದರೆ ಕೊಡುತ್ತಾರೆ.

(ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಹಿರಿಯ ಸಹಾಯಕ ಸಾರ್ವಜನಿಕ ಅಭಿಯೋಜಕರವರು ಅನುಮತಿ ಕೋರಿದ್ದು ನ್ಯಾಯಾಲಯವು ಅನುಮತಿ ನೀಡಲಾಗಿದೆ.)

**ಪಾಟೀ ಸವಾಲು ಹಿರಿಯ ಸಹಾಯಕ ಸಾರ್ವಜನಿಕ ಅಭಿಯೋಜಕರವರಿಂದಃ**

ನನ್ನ ದೂರಿನಲ್ಲಿ ಆರೋಪಿ ನನ್ನ ಮೇಲೆ ದೈಹಿಕ ದೌರ್ಜನ್ಯ ಮಾಡಿ ಎದೆಗೆ ಹಾಗೂ ನನ್ನ ಕೈಗಳಿಗೆ ಹೊಡೆದಿರುತ್ತಾನೆ ಎಂದರೆ ಸರಿ. ನನ್ನನ್ನು ಬಟ್ಟೆ ಬಿಚ್ಚಿಸಿ ಬೆತ್ತಲೆಯಾಗಿ ಮೆರವಣಿಗೆ ಮಾಡುತ್ತೇನೆ ಎಂದು ಬೈಯ್ದಿರುತ್ತಾನೆ ಎಂದರೆ ಸರಿ. ಅದೇ ಜಂಕ್ ಶೀಟುಗಳು ಕೆಡವಿ ಹಾಳು ಮಾಡಿದ್ದರಿಂದ ಸುಮಾರು 20 ಸಾವಿರ ರೂನಷ್ಟು ನಷ್ಟವುಂಟಾಗಿದೆ ಎಂದರೆ ಸರಿ.

ನಾನು ದಿ.28-08-2018 ಕ್ಕೆ ದೂರು ಕೊಟ್ಟಿದ್ದು, ಮರುದಿನ ಪೊಲೀಸರು ಘಟನಾ ಸ್ಥಳಕ್ಕೆ ಬಂದು ಬೆಳಿಗ್ಗೆ 09-00 ರಿಂದ 09-45 ಗಂಟೆ ಸಮಯದಲ್ಲಿ ಚಾಸಾ 2 ಮತ್ತು 3 ರವರ ಸಮಕ್ಷಮ ಸ್ಥಳ ಮಹಜರ್ ಮಾಡಿದರು ಎಂದರೆ ಸರಿ. ಆ ಸಮಯದಲ್ಲಿ ಪೊಲೀಸರು ಎರಡು ಪೋಟೋಗಳನ್ನು ಸಹ ತೆಗೆದಿರುತ್ತಾರೆ ಎಂದರೆ ಸರಿ. ಸದರಿ ಪೋಟೋಗಳನ್ನು ಸಾಕ್ಷಿ ನೋಡಿ ಗುರ್ತಿಸಿದ್ದು ನಿಪಿ.3 ಮತ್ತು 4 ಎಂದು ಗುರ್ತಿಸಲಾಯಿತು.

**ಆರೋಪಿ ಪರ ವಕೀಲರ ಕೋರಿಕೆಯ ಮೇರೆಗೆ ರೂ.250/- ಖರ್ಚಿನೊಂದಿಗೆ ಪಾಟೀ ಸವಾಲನ್ನು ಮುಂದೂಡಲಾಯಿತು.**

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು. ಸಾಕ್ಷಿಯ ಎದುರಿನಲ್ಲಿ ಓದಿ ಹೇಳಿದ ಮೇಲೆ ಸರಿ ಇದೆ ಎಂದು ಒಪ್ಪಿ ಸಹಿ ಮಾಡಲಾಗಿದೆ.)

**ಓ ಹೇ ಕೇ ಸ ಇ ಒ**

**8 ನೇ ಅ. ಮು. ಮ. ದಂ. ನ್ಯಾ.**